# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 423(601)
ಸದಸ್ಯರ ಹೆಸರು : ಶ್ರೀ ಕೆ.ಹರೀಶ್‌ಕುಮಾರ್
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 08-12-2023
ಉತ್ತರಿಸುವ ಸಚಿವರು : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕನ್ನಡ ಮಾಧ್ಯಮ ಶಾಲೆಗಳಲ್ಲಿ ತುಳುಭಾಷೆ ಬೋಧಿಸುವ ಗೌರವ ಶಿಕ್ಷಕರಿಗೆ ಮಾಸಿಕ ರೂ.3000 ಗೌರವಧನ ನೀಡುತ್ತಿದ್ದು ಕಳೆದ ಮೂರು ವರ್ಷಗಳಿಂದ ಗೌರವಧನ ಪಾವತಿಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಬಾಕಿ ಇರುವ ಗೌರವಧನವನ್ನು ಶಿಕ್ಷ್ಕಕರಿಗೆ ಪಾವತಿಸುವ ನಿಟ್ಟಿನಲ್ಲಿ ಸರ್ಕಾರವು ಕ್ರಮವಹಿಸುವುದೇ?<br>(ವಿವರ ಒದಗಿಸುವುದು) | ಬಂದಿದೆ.<br>ಕನ್ನಡ ಮಾಧ್ಯಮ ಶಾಲೆಗಳಲ್ಲಿ ತುಳು ಭಾಷೆ ಬೋಧಿಸುವ ಗೌರವ ಶಿಕ್ಷಕರಿಗೆ ಮಾಸಿಕ ಗೌರವ ಧನವನ್ನು ತುಳು ಅಕಾಡೆಮಿಗೆ ವಾರ್ಷಿಕವಾಗಿ ಬಿಡುಗಡೆ ಮಾಡಿರುವ ಅನುದಾನದಿಂದ 2015-16ನೇ ಸಾಲಿನಿಂದ 2019-20ನೇ ಸಾಲಿನವರೆಗೆ ಪಾವತಿಸಲಾಗಿರುತ್ತದೆ.<br>ಸದರಿ ತುಳು ಭಾಷೆ ಶಿಕ್ಷಕರಿಗೆ ಗೌರವಧನ ನೀಡುವ ಕುರಿತು ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಆರ್ಥಿಕ ಇಲಾಖೆಯು ಅನುದಾನ ಬಿಡುಗಡೆ ಮಾಡಿದ ನಂತರ ಗೌರವಧನ ನೀಡಲು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಕಸಂವಾ 44 ಕವಿಸ 2023

**(ಶಿವರಾಜ ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.